ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ವಿಭಾಗ
ಜಿ.ಕೆ.ವಿ.ಕೆ., ಬೆಂಗಳೂರು–560065

* ಸಮಗ್ರ ಕೃಷಿ ಹವಾಮಾನ ವರದಿ ಪತ್ರಿಕೆ *

ದಿನಾಂಕ: 20.05.2014

ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

ಈ ವಾರದ ಮುನ್ಸೂಚನೆ (ದಿನಾಂಕ 21.05.14 –25.05.14 ವರೆಗೆ)

	21.05.14	22.05.14	23.05.14	24.05.14	25.05.14
ಮಳೆ (ಮಿ ಮಿ)	28	27	4	0	0
ಗರಿಷ್ಠ ಉಷ್ಣಾಂಶ(ಡಿ.ಸೆ.)	34	35	35	36	37
ಕನಿಷ್ಠ ಉಷ್ಣಾಂಶ (ಡಿ.ಸೆ.)	23	23	23	23	23
ಮೋಡ (ಪ್ರಮಾಣ)	7	5	5	6	6
ಆರ್ದ್ರತೆ ೭.೨೦ ಬೆ (ಶೇ)	77	78	81	79	75
ಆರ್ದ್ರತೆ ೨.೨೦ ಮ (ಶೇ)	37	39	31	36	39
ಗಾಳಿಯ ವೇಗ (ಕಿ.ಮಿ/ಗಂಟೆಗೆ)	10	8	9	9	6
ಗಾಳಿಯ ದಿಕ್ಕು (ಡಿಗ್ರಿ)	250	260	260	270	260

ಈ ವಾರದ ಮುನ್ಸೂಚನೆಯ ಪ್ರಕಾರ ಮುಂದಿನ ನಾಲ್ಕು ದಿನಗಳಲ್ಲಿ ಮೋಡಕವಿದ ವಾತವರಣವಿದ್ದು ಮತ್ತು ಹಗುರದಿಂದ ಸಾಧಾರಣ ಮಳೆಯಾಗುವ ಸಂಭವವಿದೆ. ದಿನದ ಗರಿಷ್ಠ ಉಷ್ಣಾಂಶ 34.0-37.0^{0}C ಮತ್ತು ಕನಿಷ್ಠ 23.0 ^{o}C ಇರುವ ಸಾಧ್ಯತೆ ಇದೆ. ಬೆಳಿಗಿನ ಆರ್ದ್ರತೆ ಪ್ರಮಾಣ ಶೇ 75-81 % ಇದ್ದು, ಮಧ್ಯಾಹ್ನ 31-39 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 6-10 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ಈ ವರ್ಷದ ಮುಂಗಾರು ಜೂನ್ ಮೊದಲ ವಾರದಲ್ಲಿ ರಾಜ್ಯಕ್ಕೆ ಕಾಲಿಡುವ ಸೂಚನೆಯನ್ನು ಹವಾಮಾನ ಇಲಾಖೆ ನೀಡಿರುತ್ತದೆ. ಈ ಸಮಯದಲ್ಲಿ ರೈತರು ಉತ್ತಮ ತಳಿಗಳ ಬೀಜ ಮತ್ತು ಗೊಬ್ಬರವನ್ನು ಸಿದ್ಧವಾಗಿಟ್ಟುಕೊಳ್ಳುವ್ಯದು ಉತ್ತಮ.
- ಪ್ರಥಮ ಉಳುಮೆಯಲ್ಲಿ ಸಾವಯವ ಗೊಬ್ಬರವನ್ನು ಭೂಮಿಗೆ ಸೇರಿಸುವುದು ಹಾಗು ಬಿತ್ತನೆಗೆ ಭೂಮಿಯನ್ನು ಹದಮಾಡಿಕೊಳ್ಳುವುದು.
- ಖುಷ್ಕಿ ಜಮೀನಿನಲ್ಲಿ ಬದು ಮತ್ತು ಬಸಿಗಾಲುವೆಗಳನ್ನು ಸ್ವಚ್ಛಮಾಡುವುದು ಹಾಗು ಕೃಷಿ ಹೊಂಡಗಳನ್ನು ದುರಸ್ತಿಗೊಳಿಸಿ ನೀರು ನಿಧಾನವಾಗಿ ಹರಿಯುವಂತೆ ಮಾಡುವುದು ಮಣ್ಣಿನ ಸವಕಳಿ ತಪ್ಪಿಸಿ ಹಾಗು ಮಣ್ಣಿನ ಸ0ರಕ್ಷಣೆ ಮಾಡುವುದು.
- ಮುಂಬರುವ ಬಿತ್ತನೆಗೆ ಅಗತ್ಯವಿರುವ ಬಿತ್ತನೆ ಬೀಜಮಾದರಿಯನ್ನು ಬೀಜಪರೀಕ್ಷಾಲಯಕ್ಕೆ ಕಳುಹಿಸುವ ಮೂಲಕ ಮೊಳಕೆ ಪ್ರಮಾಣದ ಸಾಮರ್ಥ್ಯ ತಿಳಿದುಕೊಳ್ಳುವುದು.

ಮಾವು: ಹಣ್ಣನ್ನು ಕಟಾವು ಮಾಡುವ ಸಮಯದಲ್ಲಿ ನೆಲಕ್ಕೆ ತಾಗದ ರೀತಿ ಎಚ್ಚರ ವಹಿಸಿ.

- ✓ ಮಾಗಿ ಉಳುಮೆ ಮಾಡುವ್ಯದರಿಂದ ಹುಳುಗಳ ವಿವಿಧ ಹಂತಗಳನ್ನು ನಾಶಪಡಿಸಬಹುದು.

ಜಾನುವಾರುಗಳ ನಿರ್ವಹಣೆ:

ಕಾಲು ಬಾಯಿ ಜ್ವರ: ಉಪಚಾರ: ಬಿಸಿಲಿನಲ್ಲಿ ಹೆಚ್ಚು ಬಿಡಬಾರದು, ಲಸಿಕೆ ಹಾಕಿಸುವುದು, ಪೊಟ್ಯಾಶಿಯಂ ಪರ್ಮಾಂಗನೇಟ್ ನಿಂದ ಬಾಯಿಯನ್ನು ತೊಳೆಯುವುದು

- ರೇಷ್ಮೆ ಹಾಗೂ ಕೋಳಿ ಸಾಕಣೆಯ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ಕಾಪಾಡಿಕೊಳ್ಳುವುದು.

ನೋಡಲ್ ಅಧಿಕಾರಿ:
ಕೃ.ವಿ.ವಿ, ಜಿ.ಕೆ.ವಿ.ಕೆ
ಬೆಂಗಳೂರು